ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE: 30/10/2019

# ಕೇರಳದ ಶಾಸಕ ಕನ್ನಡದಲ್ಲಿ ಪ್ರಮಾಣ ವಚನ

30/10/19

**ತಿರುವನಂತಪುರ:** ಇತ್ತೀಚೆಗೆ ನಡೆದ ಉಪ ಚುನಾವಣೆಯಲ್ಲಿ ಆಯ್ಕೆಯಾದ ಐವರು



ನೂತನ ಶಾಸಕರು ಸೋಮವಾರ ಆರಂಭಗೊಂಡ ಕೇರಳ ವಿಧಾನಸಭೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ವಿ.ಕೆ.ಪ್ರಶಾಂತ್, ಕೆ.ಯು.ಜೆನಿಶ್ ಕುಮಾರ್, ಟಿ.ಜೆ.ವಿನೋದ್, ಶನಿಮೋಲ್ ಉಸ್ಮಾನ್ ಮತ್ತು ಎಂ.ಸಿ.ಕಮರುದ್ದೀನ್ ಅವರು ವಿಧಾನಸಭೆಯ ಪ್ರಶ್ನೋತ್ತರ ಅವಧಿಯ ಬಳಿಕ ಸ್ಪೀಕರ್ ಪಿ.ಶ್ರೀರಾಮಕೃಷ್ಣನ್ ಅವರ ಸಮ್ಮುಖದಲ್ಲಿ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಕಮರುದ್ದೀನ್ ಅವರು ಕನ್ನಡದಲ್ಲಿ ಹಾಗೂ ಇತರರು ಮಲಯಾಳಂ ಭಾಷೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಮೊದಲ ಬಾರಿ ಕಮರುದ್ದೀನ್ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಶಾಸಕರಾಗಿದ್ದ ಪಿ. ಬಿ ಅಬ್ದುಲ್ ರಝಾಕ್ ನಿಧನದಿಂದ ತೆರವಾಗಿದ್ದ ಕ್ಷೇತ್ರಕ್ಕೆ ಅ.21 ರಂದು ನಡೆದ ಉಪಚುನಾವಣೆಯಲ್ಲಿ 7923 ಮತಗಳ ಅಂತರದಿಂದ ಕಮರುದ್ದೀನ್ ಶಾಸಕರಾಗಿ ಆಯ್ಕೆಯಾಗಿದ್ದಾರೆ.